# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್. ರಸ್ತೆ, ತುಮಕೂರು – 572 103

ದೂರವಾಣಿ : 0816-2254546 0816-2255596, 0816-2255597 ಫ್ಯಾಕ್ಸ್ : 0816-2270719


ಸಂಖ್ಯೆ:ತು.ವಿ:ಶೈ.ವಿ:ಪಿ.ಜಿ:2023-24 14020 ದಿನಾಂಕ:24.01.2024

## ಸುತ್ತೋಲೆ

ವಿಷಯ: ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳ ವಿದ್ಯಾರ್ಥಿಗಳ ಪ್ರವೇಶಾನುಮೋದನೆ ಕುರಿತು.

ಉಲ್ಲೇಖ: 1. ವಿ.ವಿ ಸುತ್ತೋಲೆ ಸಂಖ್ಯೆ:ತು.ವಿ:ಶೈ.ವಿ:2023-24/3118 ದಿನಾಂಕ:21.11.2023
2. ವಿ.ವಿ ಸುತ್ತೋಲೆ ಸಂಖ್ಯೆ:ತು.ವಿ:ಶೈ.ವಿ:2023-24/3225 ದಿನಾಂಕ:01.12.2023
3. ವಿ.ವಿ ಸುತ್ತೋಲೆ ಸಂಖ್ಯೆ:ತು.ವಿ:ಶೈ.ವಿ:ಪಿ.ಜಿ:2023-24 ದಿನಾಂಕ:27.12.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ 2023-24 ನೇ ಶೈಕ್ಷಣಿಕ ಸಾಲಿನ ಸ್ನಾತಕೋತ್ತರ ಪ್ರವೇಶಾತಿಯು UUCMS ಮುಖಾಂತರ ನಡೆಸಲಾಗಿದ್ದು, ಉಲ್ಲೇಖ(01)ರ ಸುತ್ತೋಲೆಯಲ್ಲಿ ದಿನಾಂಕ:24.11.2023 ರ ವರೆಗೆ ಹಾಗೂ ಉಲ್ಲೇಖ(02)ರ ಸುತ್ತೋಲೆಯಲ್ಲಿ ದಿನಾಂಕ:04.12.2023 ರ ವರೆಗೆ ಪ್ರವೇಶಾತಿ ದಿನಾಂಕವನ್ನು ವಿಸ್ತರಿಸಲಾಗಿತ್ತು.

ಅದರಂತೆ ದ್ವಿತೀಯ ವರ್ಷದ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ರೂ.1,000/-ಗಳ ದಂಡ ಶುಲ್ಕದೊಂದಿಗೆ ಪ್ರವೇಶ ಶುಲ್ಕ ಪಾವತಿಸಿಕೊಳ್ಳಲು ಕೊನೆಯ ದಿನಾಂಕ:24.11.2023 ರವರೆಗೆ ವಿಸ್ತರಿಸಲಾಗಿತ್ತು.

ಈ ಹಿಂದಿನ ಶೈಕ್ಷಣಿಕ ಸಾಲಿನಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುತ್ತಿದ್ದಂತೆಯೇ ನಿಗದಿತ ನಮೂನೆಯಲ್ಲಿ 2023-24 ನೇ ಶೈಕ್ಷಣಿಕ ಸಾಲಿನ ಪ್ರಥಮ ಮತ್ತು ದ್ವಿತೀಯ ವರ್ಷದ ವಿದ್ಯಾರ್ಥಿಗಳ ಪ್ರವೇಶಾತಿ ಪಟ್ಟಿಯನ್ನು ಸಲ್ಲಿಸುವಂತೆ ತಿಳಿಸಲಾಗಿತ್ತು.

ವಿದ್ಯಾರ್ಥಿವೇತನ ಹಾಗೂ ಇತರೆ ಸೌಲಭ್ಯಗಳಿಗಾಗಿ ದಿನಾಂಕ:01.01.2024 ರಿಂದ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳ ವಿದ್ಯಾರ್ಥಿಗಳ ಪ್ರವೇಶಾನುಮೋದನೆಯು ಪ್ರಾರಂಭವಾಗಲಿದ್ದು, ಪ್ರಥಮ ವರ್ಷದ ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲನೆಗೆ ಮುದ್ದಾಂ ಸಲ್ಲಿಸಿ ವಿದ್ಯಾರ್ಥಿಗಳ ಪ್ರವೇಶಾನುಮೋದನೆಯನ್ನು ಪಡೆಯುವಂತೆ ಉಲ್ಲೇಖ(03) ರ ಪತ್ರದಲ್ಲಿ ಈಗಾಗಲೇ ತಿಳಿಸಲಾಗಿತ್ತು.

ಮುಂದುವರೆದು ಇನ್ನೂ ಅನೇಕ ಸ್ನಾತಕೋತ್ತರ ಮತ್ತು ಘಟಕ ಹಾಗೂ ಸಂಯೋಜಿತ ಕಾಲೇಜುಗಳ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು ಪ್ರವೇಶಾನುಮೋದನೆಯನ್ನು ಪಡೆದಿರುವುದಿಲ್ಲ. ಆದುದರಿಂದ ದಿನಾಂಕ:31.01.2024 ರ ಒಳಗಾಗಿ ಪ್ರಥಮ ವರ್ಷದ ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಪರಿಶೀಲನೆಗೆ ಮುದ್ದಾಂ ಸಲ್ಲಿಸಿ ವಿದ್ಯಾರ್ಥಿಗಳ ಪ್ರವೇಶಾನುಮೋದನೆಯನ್ನು ಪಡೆಯುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

Mangalahanumanth

ಉಪಕುಲಸಚಿವರು

ಶೈಕ್ಷಣಿಕ ವಿಭಾಗ

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕಮತ್ತು ಸಂಯೋಜಿತ ಕಾಲೇಜುಗಳು, ತುಮಕೂರು. ವಿಶ್ವವಿದ್ಯಾನಿಲಯ, ತುಮಕೂರು
3. ಸಂಯೋಜಕರು, ಶಿರಾ ಸ್ನಾತಕೋತ್ತರ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ಭುವನಹಳ್ಳಿ, ಶಿರಾ
4. ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತಿಪಟೂರು.